ರಾಜ್ಯದ ಕಾಲೇಜುಗಳಲ್ಲಿ ಖಾಲಿಯಿರುವ ಎಂ.ಪಿ.ಇಡಿ ಹುದ್ದೆಗಳು

1430 (2034)

ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳ ಎಷ್ಟು ಎಂ.ಪಿ.ಇಡಿ ಹುದ್ದೆಗಳು ಖಾಲಿ ಇವೆ?

ಆ) ಈ ಹುದ್ದೆಗಳನ್ನು ತುಂಬದೇ ಇರುವುದಕ್ಕೆ ಕಾರಣವೇನು?

ಇ) ಈ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

ಶ್ರೀ ಬಿ.ಎ.ಮೊಹಿದ್ದೀನ್ (ಉನ್ನತ ಶಿಕ್ಷಣ ಸಚಿವರು):

ಅ) 41 ಹುದ್ದೆಗಳು ಖಾಲಿ ಇವೆ

ಆ ಮತ್ತು ಇ) 41 ಹುದ್ದೆಗಳ ಪೈಕಿ ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ 14 ಅಭ್ಯರ್ಥಿಗಳಿಗೆ ಈಗಾಗಲೇ ನೇಮಕಾತಿ ಆದೇಶ ಹೊರಡಿಸಲಾಗಿ ಉಳಿದ 27 ಹುದ್ದೆಗಳಿಗೆ ಯುಜಿಸಿ ನಿಯಮಾವಳಿಗಳ ಪ್ರಕಾರ ಸ್ನಾತಕೋತ್ತರ ಎಂ ಪಿ ಇಡಿ ಪದವಿಯಲ್ಲಿ ಶೇಕಡ 55 ಅಂಕಗಳನ್ನು ಪಡೆದು ಎನ್‌ಇಟಿ/ ಎಸ್‌ಎಲ್‌ಇಟಿ ಪಡೆದ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ, ತುಂಬಲಾಗಿಲ್ಲ. ಆದಾಗ್ಯೂ ಈ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ತುಂಬಲು ಕ್ರಮಕೈಗೊಳ್ಳಲಾಗುವುದು.

ಉಡುಪಿ ಜಿಲ್ಲೆಯಲ್ಲಿ ವಿಶ್ವಬ್ಯಾಂಕ್ ಕುಡಿಯುವ ನೀರಿನ ಯೋಜನೆ.

1432 (2037)

ಶ್ರೀ ಕೆ.ಪ್ರತಾಪ ಚಂದ್ರ ಶೆಟ್ಟಿ (ಕುಂದಾಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಖಾತೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ವಿಶ್ವಬ್ಯಾಂಕ್ ಯೋಜನೆಯ ಉಡುಪಿ ಜಿಲ್ಲೆಯಲ್ಲಿ ಮಂಜೂರಾಗಿರುವ ಕುಡಿಯುವ ನೀರಿನ ಯೋಜನೆಗಳಾವುವು?